ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ – ಕರ್ನಾಟಕ
ರಾಜ್ಯ ಯೋಜನಾ ನಿರ್ದೇಶಕರು ಕಛೇರಿ, ಹೊಸ ಸಾರ್ವಜನಿಕ ಕಛೇರಿ
ಪೂರಕ ಕಟ್ಟಡಗಳು ಕೆ.ಆರ್.ಸರ್ಕಲ್, ನೃಪತುಂಗ ರಸ್ತೆ, ಬೆಂಗಳೂರು-560001

ಸಂಖ್ಯೆ:ಸಿ3(ಆ3)/ರಾಮಾಶಿಅ/ಆಶಾ 15/ಮಾಹ/2016/10208 ದಿನಾಂಕ: 07-05-2018

## ಅಧಿಕೃತ ಜ್ಞಾಪನ

ವಿಷಯ: ಮಾಹಿತಿ ಹಕ್ಕು ಅಧಿನಿಯಮ-2005ರಡಿ ಸಾರ್ವಜನಿಕ ಪ್ರಾಧಿಕಾರಗಳನ್ನು ಸರ್ವ ಶಿಕ್ಷಣ ಅಭಿಯಾನ ಹಾಗೂ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ, ರಾಜ್ಯ ಯೋಜನಾ ನಿರ್ದೇಶಕರ ಕಛೇರಿಯಲ್ಲಿ ನೇಮಕ ಮಾಡಿರುವ ಬಗ್ಗೆ.

ಉಲ್ಲೇಖ:1 ಸರ್ಕಾರದ ಅಧಿಸೂಚನೆ ಸಂಖ್ಯೆ :ಇಡಿ 17 ಪಿಡಿಬು 2015 ದಿನಾಂಕ 20-02-2016.

2 ಸರ್ಕಾರದ ಆದೇಶ ಸಂಖ್ಯೆ ಇಡಿ 47 ಎಂಸಿಡಿ 2017 ಬೆಂಗಳೂರು, ದಿನಾಂಕ 06-07-2017

*****

**ಪ್ರಸ್ತಾವನೆ:**

ಉಲ್ಲೇಖ (1) ರ ಸರ್ಕಾರದ ಅಧಿಸೂಚನೆ ಸಂಖ್ಯೆ :ಇಡಿ 17 ಪಿಡಿಬಿ 2015 ದಿನಾಂಕ 20-02-2016ರಲ್ಲಿ ಮಾಹಿತಿ ಹಕ್ಕು ಕಾಯ್ದೆ 2005ರ ಸೆಕ್ಷನ್ 5 (1), 5 (2) ಮತ್ತು 19 (1) ರ ಅಡಿಯಲ್ಲಿ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಸಾರ್ವಜನಿಕ ಪ್ರಾಧಿಕಾರಿಗಳು, ಸಾರ್ವಜನಿಕ ಮಾಹಿತಿ ಅಧಿಕಾರಿಗಳು, ಸಹಾಯಕ ಮಾಹಿತಿ ಅಧಿಕಾರಿಗಳು ಹಾಗೂ ಮೇಲ್ಮನವಿ ಪ್ರಾಧಿಕಾರಗಳನ್ನು ಪರಿಷ್ಕರಿಸಿ ಆದೇಶ ಹೊರಡಿಸಲಾಗಿರುತ್ತದೆ. ಅದರಂತೆ, ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ ಹಾಗೂ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಬೆಂಗಳೂರು, ಈ ಕಛೇರಿಯಲ್ಲಿನ ಸಾರ್ವಜನಿಕ ಮಾಹಿತಿ ಅಧಿಕಾರಿಗಳು, ಸಹಾಯಕ ಮಾಹಿತಿ ಅಧಿಕಾರಿಗಳು ಹಾಗೂ ಮೇಲ್ಮನವಿ ಪ್ರಾಧಿಕಾರಗಳನ್ನು ಪ್ರತ್ಯೇಕವಾಗಿ ಈ ಕೆಳಕಂಡಂತೆ ಪರಿಷ್ಕರಿಸಲಾಗಿತ್ತು.

| ಕಛೇರಿ ಹೆಸರು | ಸಾರ್ವಜನಿಕ ಮಾಹಿತಿ ಅಧಿಕಾರಿ | ಸಹಾಯಕ ಮಾಹಿತಿ ಅಧಿಕಾರಿ | ಮೇಲನ್ಮವಿ ಪ್ರಾಧಿಕಾರಿ |
|---|---|---|---|
| ಸರ್ವ ಶಿಕ್ಷಣ ಅಭಿಯಾನ ಬೆಂಗಳೂರು | ಕಾರ್ಯಕ್ರಮಾಧಿಕಾರಿ | ಕಿರಿಯ ಕಾರ್ಯಕ್ರಮಾಧಿಕಾರಿ | ವಿಷಯಕ್ಕೆ ಸಂಬಂಧಿಸಿದ ಜಂಟಿ ನಿರ್ದೇಶಕರು |
| ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಬೆಂಗಳೂರು | ಹಿರಿಯ ಕಾರ್ಯಕ್ರಮಾಧಿಕಾರಿ | ಕಿರಿಯ ಕಾರ್ಯಕ್ರಮಾಧಿಕಾರಿ | ಜಂಟಿ ನಿರ್ದೇಶಕರು |

ಉಲ್ಲೇಖ (2)ರ ಸರ್ಕಾರಿ ಆದೇಶದಲ್ಲಿ ಸರ್ವ ಶಿಕ್ಷಣ ಅಭಿಯಾನ ಹಾಗೂ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಕಾರ್ಯ ಚಟುವಟಿಕೆಗಳನ್ನು ಅಂತರ್ಗತಗೊಳಿಸಲಾಗಿರುತ್ತದೆ. ಅದರಂತೆ ಮಾಹಿತಿ ಹಕ್ಕು ಅಧಿನಿಯಮ-2005ರ ಕಲಂ 5(1) ರಡಿ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ, ಸಾರ್ವಜನಿಕ ಮಾಹಿತಿ ಅಧಿಕಾರಿ ಮತ್ತು ಮೇಲ್ಮನವಿ ಪ್ರಾಧಿಕಾರಗಳನ್ನು ಈ ಕೆಳಕಂಡಂತೆ ನೇಮಕ ಮಾಡಿ ಆದೇಶಿಸಲಾಗಿದೆ.

| ಸಾರ್ವಜನಿಕ ಪ್ರಾಧಿಕಾರ | ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ (2005 ಮಾಹಿತಿ ಕಾಯ್ದೆ ಸೆಕ್ಷನ್ 5(2)ರ ಅಡಿಯಲ್ಲಿ) | ಸಾರ್ವಜನಿಕ ಮಾಹಿತಿ ಅಧಿಕಾರಿ (2005ರ ಮಾಹಿತಿ ಕಾಯ್ದೆ ಸೆಕ್ಷನ್ 5(1)ರ ಅಡಿಯಲ್ಲಿ | ಪ್ರಥಮ ಮೇಲ್ಮನವಿ ಪ್ರಾಧಿಕಾರಿ (2005ರ ಮಾಹಿತಿ ಕಾಯ್ದೆ ಸೆಕ್ಷನ್ 19(1)ಅಡಿಯಲ್ಲಿ) |
|---|---|---|---|
| ರಾಜ್ಯ ಯೋಜನಾ ನಿರ್ದೇಶಕರ ಕಛೇರಿ, ಸರ್ವ ಶಿಕ್ಷಣ ಅಭಿಯಾನ ಹಾಗೂ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ, ಕಛೇರಿ ಪೂರಕ ಕಟ್ಟಡ, ನೃಪತುಂಗ ರಸ್ತೆ, ಕೆ.ಆರ್. ವೃತ್ತ, ಬೆಂಗಳೂರು-01 | ವಿಷಯಕ್ಕೆ ಸಂಬಂಧಿಸಿದ ಕಾರ್ಯಕ್ರಮ ಅಧಿಕಾರಿ / ಕಿರಿಯ ಕಾರ್ಯಕ್ರಮ ಅಧಿಕಾರಿ | ಹಿರಿಯ ಕಾರ್ಯಕ್ರಮ ಅಧಿಕಾರಿ (ಆಡಳಿತ) | ಸಹ ನಿರ್ದೇಶಕರು (ಆಡಳಿತ) |
| | ವಿಷಯಕ್ಕೆ ಸಂಬಂಧಿಸಿದ ಕಾರ್ಯಕ್ರಮ ಅಧಿಕಾರಿ / ಕಿರಿಯ ಕಾರ್ಯಕ್ರಮ ಅಧಿಕಾರಿ | ಹಿರಿಯ ಕಾರ್ಯಕ್ರಮ ಅಧಿಕಾರಿ (ಯೋಜನೆ) | |
| | ವಿಷಯಕ್ಕೆ ಸಂಬಂಧಿಸಿದ ಕಾರ್ಯಕ್ರಮ ಅಧಿಕಾರಿ / ಕಿರಿಯ ಕಾರ್ಯಕ್ರಮ ಅಧಿಕಾರಿ | ಹಿರಿಯ ಕಾರ್ಯಕ್ರಮ ಅಧಿಕಾರಿ (ಕಾರ್ಯಕ್ರಮ) | ಸಹ ನಿರ್ದೇಶಕರು (ಕಾರ್ಯಕ್ರಮ) |
| | ವಿಷಯಕ್ಕೆ ಸಂಬಂಧಿಸಿದ ಕಾರ್ಯಕ್ರಮ ಅಧಿಕಾರಿ / ಕಿರಿಯ ಕಾರ್ಯಕ್ರಮ ಅಧಿಕಾರಿ | ಹಿರಿಯ ಕಾರ್ಯಕ್ರಮ ಅಧಿಕಾರಿ (ಗುಣಮಟ್ಟ) | ಸಹ ನಿರ್ದೇಶಕರು (ಗುಣಮಟ್ಟ) |
| | ವಿಷಯಕ್ಕೆ ಸಂಬಂಧಿಸಿದ ಕಾರ್ಯಕ್ರಮ ಅಧಿಕಾರಿ / ಕಿರಿಯ ಕಾರ್ಯಕ್ರಮ ಅಧಿಕಾರಿ | ಹಿರಿಯ ಕಾರ್ಯಕ್ರಮ ಅಧಿಕಾರಿ (ಗುಣಮಟ್ಟ ಖಾತರಿ) | ಸಹ ನಿರ್ದೇಶಕರು (ಗುಣಮಟ್ಟ ಖಾತರಿ) |
| | ವಿಷಯಕ್ಕೆ ಸಂಬಂಧಿಸಿದ ಪ್ರಥಮ ದರ್ಜೆ ಸಹಾಯಕರು | ವಿಷಯಕ್ಕೆ ಸಂಬಂಧಿಸಿದ ಲೆಕ್ಕಾಧೀಕ್ಷಕರು | ಮುಖ್ಯ ಲೆಕ್ಕಾಧಿಕಾರಿಗಳು |
| | ವಿಷಯಕ್ಕೆ ಸಂಬಂಧಿಸಿದ ಸಹಾಯಕ ಅಭಿಯಂತರರು | ವಿಷಯಕ್ಕೆ ಸಂಬಂಧಿಸಿದ ಸಹಾಯಕ ಕಾರ್ಯಪಾಲಕ ಅಭಿಯಂತರರು | ರಾಜ್ಯ ಯೋಜನಾ ಅಭಿಯಂತರರು |

ಮೇಲಿನ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗಳು, ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಹಾಗೂ ಪ್ರಥಮ ಮೇಲ್ಮನವಿ ಪ್ರಾಧಿಕಾರಿಗಳು ಮಾಹಿತಿ ಹಕ್ಕು ಅಧಿನಿಯಮ 2005 ಹಾಗೂ ಸದರಿ ಅಧಿನಿಯಮದಡಿ ರೂಪಿಸಲಾಗಿರುವ ನಿಯಮಗಳ ಅನ್ವಯ ಕಾರ್ಯ ನಿರ್ವಹಿಸುವುದು.

ಈ ಕಛೇರಿಗೆ ಸಂಬಂಧಿಸಿದ ಯಾವುದೇ ಮಾಹಿತಿಯನ್ನು / ದಾಖಲೆಗಳನ್ನು ಅರ್ಜಿದಾರರಿಗೆ ಒದಗಿಸುವ ಪೂರ್ವದಲ್ಲಿ ಅರ್ಜಿದಾರರು ಕೋರಿರುವ ಮಾಹಿತಿಯನ್ನು ನಿಯಮಗಳನ್ವಯ ಒದಗಿಸಲು ಅವಕಾಶವಿದೆಯೇ ಹಾಗೂ ಒದಗಿಸಲಾಗುತ್ತಿರುವ ಮಾಹಿತಿಯು ಇಲಾಖೆಯ ಕಾರ್ಯ ಚಟುವಟಿಕೆಗಳ ವ್ಯಾಪ್ತಿಯಲ್ಲಿ ಇರುತ್ತದೆಯೇ ಎಂಬ ಬಗ್ಗೆ ಖಚಿತ ಪಡಿಸಿಕೊಂಡು ಸರಿಯಾದ ಮತ್ತು ಖರಾರುವಕ್ಕಾದ ಮಾಹಿತಿಯನ್ನು ಒದಗಿಸುವುದು.

ಯಾವುದೇ ಮಾಹಿತಿಯನ್ನು ಒದಗಿಸುವ ಸಂದರ್ಭದಲ್ಲಿ / ಪೂರ್ವದಲ್ಲಿ ಸದರಿ ಮಾಹಿತಿಯ ನಿಖರತೆಯ ಬಗ್ಗೆ ಮೇಲಾಧಿಕಾರಿಗಳ ಮಾರ್ಗದರ್ಶನ ಪಡೆಯಬಹುದು.

ರಾಜ್ಯ ಯೋಜನಾ ನಿರ್ದೇಶಕರು
ಸರ್ವ ಶಿಕ್ಷಣ ಅಭಿಯಾನ ಮತ್ತು
ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ
ಬೆಂಗಳೂರು

**ಪ್ರತಿಯನ್ನು ಗೌರವಗಳೊಂದಿಗೆ,**

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ), ಬಹುಮಹಡಿ ಕಟ್ಟಡ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
3. ಕಛೇರಿ ಪ್ರತಿ